ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

AU – 4J Part – IVA	ಬೆಂಗಳೂರು, ಮಂಗಳವಾರ, 06, ಏಪ್ರಿಲ್, 2021 (ಚೈತ್ರ, 16, ಶಕವರ್ಷ, ೧೯೪೩) BENGALURU, TUESDAY, 06, APRIL, 2021 (Chaithra, 16, SHAKAVARSHA, 1943)	ನಂ. 404 No. 404

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 17 ಶಾಸನ 2021, ದಿನಾಂಕ: 06 .04.2021

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2021 ಇದಕ್ಕೆ 2021ರ ಏಪ್ರಿಲ್ ತಿಂಗಳ 5ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2021 ರ ಕರ್ನಾಟಕ ಅಧಿನಿಯಮ ಸಂಖ್ಯೆ:19 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 19

(2021ರ ಏಪ್ರಿಲ್ ತಿಂಗಳ 6ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2021

(2021ರ ಏಪ್ರಿಲ್ ತಿಂಗಳ 5ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು (2000ರ ಕರ್ನಾಟಕ ಅಧಿನಿಯಮ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತದ ಗಣರಾಜ್ಯದ ಎಪ್ಪತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.- (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2021 ಎಂದು ಕರೆಯತಕ್ಕದ್ದು.

(2) ಇದು, ಈ ಕೂಡಲೇ ಜಾರಿಗೆ ಬರತಕ್ಕದ್ದು.

2. 4ನೇ ಪ್ರಕರಣದ ತಿದ್ದುಪಡಿ.- ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ (2000ರ ಕರ್ನಾಟಕ ಅಧಿನಿಯಮ 29) 4ನೇ ಪ್ರಕರಣದ (ಇಇಇ)ನೇ ಖಂಡದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಇ4) ಸಂಗ್ರಹಣಾ ಸಂಸ್ಥೆಯು, ಕರ್ನಾಟಕ ಗ್ರಾಮೀಣ ಮೂಲಭೂತಸೌಕರ್ಯ ಅಭಿವೃದ್ಧಿ ನಿಯಮಿತವು ಕಾಮಗಾರಿಗಳನ್ನು ಸ್ವಯಂ ಕಾರ್ಯಗತಗೊಳಿಸುವ ಪರತ್ತಿಗೆ ಒಳಪಟ್ಟು, ಎರಡು ಕೋಟಿ ರೂಪಾಯಿಗಳಿಗೆ ಮೀರದಿರುವ ಮೌಲ್ಯದ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಎಲ್ಲಾ ವಿಧದ ನಿರ್ಮಾಣ ಕಾಮಗಾರಿಗಳನ್ನು ಕರ್ನಾಟಕ ಗ್ರಾಮೀಣ ಮೂಲಭೂತಸೌಕರ್ಯ ಅಭಿವೃದ್ಧಿ ನಿಯಮಿತಕ್ಕೆ ವಹಿಸಿಕೊಟ್ಟಲ್ಲಿ:

ಪರಂತು, ಉಪ-ಗುತ್ತಿಗೆಯು ಅವಶ್ಯಕವಾದ ಸಂದರ್ಭದಲ್ಲಿ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿ ಟೆಂಡರಿನ ಮೂಲಕ ಮಾಡತಕ್ಕದ್ದು:

ಮತ್ತು ಪರಂತು, ಟೆಂಡರಿನ ಮೂಲಕ ನಿರ್ಮಾಣ ಕಾಮಗಾರಿಗಳನ್ನು ಉಪ-ಗುತ್ತಿಗೆ ನೀಡುವಾಗ ಈ ಅಧಿನಿಯಮದ 6ನೇ ಪ್ರಕರಣದ ಪರಂತುಕಗಳ ಅನುಸಾರವಾಗಿ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗಾಗಿ ಮೀಸಲಿರಿಸತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ದ್ವಾರಕನಾಥ್ ಬಾಬು)
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

PARLIAMENTARY AFFAIRS AND LEGISLATION SECRETARIAT

NOTIFICATION

NO. DPAL 17 SHASANA 2021, BENGALURU, DATED: 06.04.2021

ಭಾರತ ಸಂವಿಧಾನದ ಅನುಚ್ಛೇದ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2021 (2021ರ ಕರ್ನಾಟಕ ಅಧಿನಿಯಮ ಸಂಖ್ಯೆ:19) ನ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

KARNATAKA ACT NO.19 OF 2021

(First Published in the Karnataka Gazette Extra-ordinary on the 6th day of April, 2021)

THE KARNATAKA TRANSPARENCY IN PUBLIC PROCUREMENTS (AMENDMENT) ACT, 2021

(Received the assent of the Governor on the 5th day of April, 2021)

An Act further to amend the Karnataka Transparency in Public Procurements Act, 1999.

Whereas it is expedient further to amend the Karnataka Transparency in Public Procurements Act, 1999 (Karnataka Act 29 of 2000) for the purposes hereinafter appearing;

Be it enacted by the Karnataka State Legislature in the Seventy second year of the Republic of India as follows:-

1. Short title and commencement.- (1) This Act may be called the Karnataka Transparency in Public Procurements (Amendment) Act, 2021.

(2) It shall come into force at once.

2. Amendment of section 4.- In the Karnataka Transparency in Public Procurements Act, 1999 (Karnataka Act 29 of 2000), in section 4, after clause (eee) the following shall be inserted, namely:-

"(e 4) where the procurement entity entrusts the construction works of all types in rural and urban areas, the value of which does not exceed rupees two crores to the Karnataka Rural Infrastructure Development Limited, subject to the condition that the Karnataka Rural Infrastructure Development Limited shall execute works by itself :

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

Provided that, in case sub-letting is necessary, it shall be done through tendering in accordance with the provisions of this Act:

Provided further that, while sub-letting construction works through tender it shall be reserved in favour of persons belonging to the scheduled castes and scheduled tribes in accordance with the provisos to section 6 of this Act."

The above translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2021 (2021 ರ ಕರ್ನಾಟಕ ಅಧಿನಿಯಮ ಸಂಖ್ಯೆ:19) be published in the official Gazette under clause (3) of Article 348 of the Constitution of India.

VAJUBHAI VALA
GOVERNOR OF KARNATAKA

By Order and in the name of
the Governor of Karnataka,

(K.DWARAKANATH BABU)
Secretary to Government
Department of Parliamentary Affairs
and Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು.

SUNIL GARDE Digitally signed by SUNIL GARDE Date: 2021.04.06 17:00:57 +05'30'